ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ದಾಖಲಾತಿ (2017-18)/2016-17 ದಿನಾಂಕ: 12-01-2017

**: : ಸುತ್ತೋಲೆ : :**

ವಿಷಯ: 2017-18ನೇ ಸಾಲಿನ ಶಿಕ್ಷಣ ಹಕ್ಕು ಕಾಯ್ದೆಯಡಿ ದಾಖಲಾತಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ಆರ್.ಟಿ.ಇ ಸಹಾಯವಾಣಿ ಸಕ್ರಿಯಗೊಳಿಸುವುದರ ಜೊತೆಗೆ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಆದಾರ್ ಕೇಂದ್ರ ಮತ್ತು ಅರ್ಜಿ ಸಲ್ಲಿಕೆ ಕೇಂದ್ರ ಹಾಗೂ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಯಲ್ಲಿ ಅರ್ಜಿ ಸಲ್ಲಿಕೆ ಕೇಂದ್ರ ತೆರೆಯುವ ಬಗ್ಗೆ.

ಉಲ್ಲೇಖ: 1. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009.
2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012.
3. ದಿನಾಂಕ: 16-012-2016 ರಂದು ರಾಜ್ಯ ಹಂತದಲ್ಲಿ ನಡೆದ ಜಿಲ್ಲಾ ಆರ್.ಟಿ.ಇ ನೋಡಲ್ ಅಧಿಕಾರಿಗಳು ಮತ್ತು ಕಂಪ್ಯೂಟರ್ ಪ್ರೋಗ್ರಾಮರ್‌ಗಳ ಸಭೆ.

* * * * *

1. 2017-18ನೇ ಸಾಲಿನ ಆರ್.ಟಿ.ಇ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ದಿನಾಂಕ:20-01-2017 ರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗುವುದು.

2. ಆನ್ ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಪೋಷಕರಿಗೆ ತೊಂದರೆಯಾಗದಂತೆ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಲು ಅನುಕೂಲ ಕಲ್ಪಿಸಲು ಸೂಚಿಸಲಾಗಿದೆ.

3. ಸಾರ್ವಜನಿಕರಿಗೆ ಹೆಚ್ಚಿನ ರೀತಿಯಲ್ಲಿ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಸಮರ್ಪಕ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವ ಡಾಟ ಎಂಟ್ರಿ ಆಪರೇಟರ್ (ಡಿಇಒ) ಗಳನ್ನು ಅರ್ಜಿ ಸಲ್ಲಿಕೆ ಪ್ರಕ್ರಿಯೆ ಮುಗಿಯುವರೆಗೂ ಪೂರ್ಣಕಾಲಿಕವಾಗಿ ನಿಯೋಜಿಸುವುದು.

4. ಈ ಸಾಲಿನಲ್ಲಿ ಆರ್.ಟಿ.ಇ ಅರ್ಜಿ ಸಲ್ಲಿಸಲು ಮಗು ಮತ್ತು ತಂದೆ/ತಾಯಿ/ಪೋಷಕರ ಹೆಬ್ಬೆಟ್ಟನ್ನು SCAN ಮಾಡಬೇಕಾದ ಕಾರಣ BIOMETRIC ಯಂತ್ರವನ್ನು ಈ ಕಾರ್ಯಕ್ಕೆ ಬಳಸ ಬೇಕಾಗುತ್ತದೆ. ಅಲ್ಲದೇ ದಾಖಲೆಗಳನ್ನು SCAN ಮಾಡಿ ಅಪ್‌ಲೋಡ್ ಮಾಡಬೇಕಾಗುವ ಕಾರಣ ಒಂದು ಸ್ಕ್ಯಾನರ್ ಇದಕ್ಕಾಗಿ ಒದಗಿಸುವುದು. ಅರ್ಜಿ ಸಲ್ಲಿಕೆಯ ನಂತರ ಸ್ವೀಕೃತಿಯನ್ನು ಮುದ್ರಿಸಿ ಒದಗಿಸಬೇಕಾದ ಕಾರಣ ಒಂದು ಪ್ರಿಂಟರ್ ಅನ್ನು ಸಹಾ ಈ ಕಾರ್ಯಕ್ಕೆ ಅಳವಡಿಸಿಕೊಳ್ಳಬೇಕಿದ್ದು, ಈ ಕೆಲಸಕ್ಕೆ ನಿಮ್ಮ ಕಛೇರಿಯಲ್ಲಿ ಇರುವ BIOMETRIC ಯಂತ್ರ, ಸ್ಕ್ಯಾನರ್ ಹಾಗೂ ಪ್ರಿಂಟರ್ ಸಾಮಗ್ರಿಗಳನ್ನು ಉಪಯೋಗಿಸಿಕೊಳ್ಳುವುದು. ಅಗತ್ಯಕ್ಕಿಂತ ಹೆಚ್ಚಿನ ಉಪಕರಣಗಳು ಬೇಕಾದಲ್ಲಿ ತಮ್ಮ ವ್ಯಾಪ್ತಿಯ ಯಾವುದಾದರೂ ಶಾಲೆಯಿಂದ ಪಡೆದು ಅರ್ಜಿ ಸಲ್ಲಿಕೆಗೆ ಅನಾನುಕೂಲವಾಗದಂತೆ ಕ್ರಮವಹಿಸುವುದು.

5. ಪೋಷಕರು / ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡಲು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿಯೇ ದಾಖಲಾತಿ ಪ್ರಕ್ರಿಯೆ ತಿಳಿದಿರುವ ಒಬ್ಬ ಸಿಬ್ಬಂದಿಯನ್ನು ನಿಯೋಜಿಸಲು ಸೂಚಿಸಿದೆ.

6. ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಪ್ರವೇಶ ಪ್ರಕ್ರಿಯೆ ಮುಗಿಯುವರೆಗೂ (ಬೆಳಗ್ಗೆ 10-00 ಗಂಟೆಯಿಂದ ಸಂಜೆ 5-30 ಗಂಟೆಯವರೆಗೆ) ಸಹಾಯವಾಣಿಯನ್ನು ನಿರ್ವಹಿಸಲು ಸೂಚಿಸಿದೆ. ಈ ಬಗ್ಗೆ ಪೋಷಕರು ಮತ್ತು ಸಾರ್ವಜನಿಕರಿಗೆ ತಿಳುವಳಿಕೆ ನೀಡಲೂ ಸಹಾ ಸೂಚಿಸಿದೆ.

7. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಸಮರ್ಪಕವಾಗಿ ಪ್ರವೇಶ ಪ್ರಕ್ರಿಯೆ ಬಗ್ಗೆ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಪ್ರತಿ ದಿನವೂ ಸಹಾ ಮೇಲ್ವಿಚಾರಣೆ ಮಾಡಲು ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಚಿಸಿದೆ.

8. ಒಂದು ವೇಳೆ ಡಾಟ ಎಂಟ್ರಿ ಆಪರೇಟರ್ (ಡಿಇಒ) ಗಳ ಕೊರತೆ ಕಂಡ ಬಂದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೆ ಹೆಚ್ಚುವರಿಯಾಗಿ ಪ್ರವೇಶ ಪ್ರಕ್ರಿಯೆ ಮುಗಿಯುವವರೆಗೂ ಡಾಟ ಎಂಟ್ರಿ ಆಪರೇಟರ್ (ಡಿಇಒ) ಗಳನ್ನು ನಿಯೋಜಿಸಿಕೊಳ್ಳಲು ಸೂಚಿಸಿದೆ.

9. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಂಟು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಕೆ ಕೇಂದ ಹಾಗೂ ಆಧಾರ್ ನೋಂದಣಿ ಕೇಂದ್ರವನ್ನು ಸಂಬಂಧಿಸಿದ ಆದಾರ್ ಕಛೇರಿಯ ಸಹಕಾರ ಪಡೆದು ದಿನಾಂಕ:20-01-2017 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಮುಗಿಯುವರೆಗೂ ಪ್ರತಿ ದಿನವೂ ತೆರೆಯಲು ಸೂಚಿಸಿದೆ. ಈ ಸಂಬಂಧ ಅಗತ್ಯ ಸಿಬ್ಬಂದಿಯನ್ನು ನಿಯೋಜಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸೂಚಿಸಲಾಗಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.